ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–287

**26 ಮಾರ್ಚ್ 2022 * ಶನಿವಾರ * ಸಂಜೆ 6.00**

# 1173, 80 ಅಡಿ ರಸ್ತೆ, ಉತ್ತಮ್ ಭಂಡಾರ್ ಹತ್ತಿರ
ಜೆಎಸ್‌ಎಸ್ ಬಡಾವಣೆ 2ನೇ ಹಂತ, ಮೈಸೂರು 570 028

## ದಿವ್ಯ ಆಶೀರ್ವಾದ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀಕ್ಷೇತ್ರ

## ಅಧ್ಯಕ್ಷತೆ

**ಶ್ರೀ ಎಸ್.ಇ. ಗಂಗಾಧರಸ್ವಾಮಿ**
ಸಹಾಯಕ ಪೊಲೀಸ್ ಆಯುಕ್ತರು, ಸಂಚಾರಿ ಉಪವಿಭಾಗ, ಮೈಸೂರು

## ಉಪನ್ಯಾಸ

**ಪ್ರೊ. ಡಿ.ಎಸ್. ಸದಾಶಿವಮೂರ್ತಿ**
ನಿವೃತ್ತ ಪ್ರಾಧ್ಯಾಪಕರು, ಮೈಸೂರು

**ವಿಷಯ : ಬಸವಣ್ಣನವರ ವಿನೀತಭಾವ**

## ಭಜನೆ

**ಶ್ರೀ ಶಿವರಾತ್ರೀಶ್ವರ ಭಜನಾ ಮಂಡಳಿ**
ಜೆಎಸ್‌ಎಸ್ ಬಡಾವಣೆ, 2ನೇ ಹಂತ, ಮೈಸೂರು

---

## ಪ್ರಾಯೋಜಕರು

**ಶ್ರೀಮತಿ ಕೆ.ಎಂ. ಸರ್ವಮಂಗಳ ಮತ್ತು ಶ್ರೀ ಎಂ. ಸಿ. ದೇವರಾಜುರವರು**
ಮುಖ್ಯೋಪಾಧ್ಯಾಯರು, ಜೆಎಸ್‌ಎಸ್ ಪ್ರೌಢಶಾಲೆ, ಲಕ್ಷ್ಮೀಪುರಂ, ಮೈಸೂರು

**ತಮಗೆ ಆದರದ ಸ್ವಾಗತ**

ಶ್ರೀಮತ್ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಹಲವಾರು ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ನಡೆಸುತ್ತಿದ್ದರು. 1986 ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ದಿನಾಂಕ 12.5.1996 ರಂದು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಪ್ರೊ. ಡಿ.ಎಸ್. ಸದಾಶಿವಮೂರ್ತಿಯವರ** ಜನ್ಮಸ್ಥಳ ನಂಜನಗೂಡು ತಾಲ್ಲೂಕು ದೇವನೂರು. ಮೈಸೂರು ವಿಶ್ವವಿದ್ಯಾನಿಲಯದಿಂದ ಅರ್ಥಶಾಸ್ತ್ರ ವಿಷಯದಲ್ಲಿ ಎಂ.ಎ. ಪದವಿ ಪಡೆದು ಗುಂಡ್ಲುಪೇಟೆಯ ಜೆಎಸ್‌ಎಸ್ ಕಾಲೇಜಿನಲ್ಲಿ ಉಪನ್ಯಾಸಕರಾಗಿ ಸೇವೆ ಪ್ರಾರಂಭಿಸಿದರು. ನಂಜನಗೂಡು, ಮೈಸೂರಿನ ಕಾಲೇಜುಗಳಲ್ಲಿ ಮೂರು ದಶಕಗಳಿಗೂ ಹೆಚ್ಚು ಕಾಲ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಉತ್ತಮ ವಾಗ್ಮಿಗಳು. ಸಾಹಿತ್ಯದಲ್ಲಿ ಅಪಾರ ಆಸಕ್ತಿ ಹೊಂದಿರುವ ಇವರು ನಿರಂಜನ, ಮಹಾಘನ, ದೇವಸಿರಿ, ಸಮನ್ವಯ, ಸಂಚಲನ, ಬಸವಬಳ್ಳಿ ಮೊದಲಾದ ಸಂಸ್ಮರಣ ಸಂಚಿಕೆಗಳು ಮತ್ತು ಚೆನ್ನಶ್ರೀ ಗುರುವಂದನಾ ಗ್ರಂಥ ಹಾಗೂ ಕಾಲೇಜು ವಾರ್ಷಿಕ ಸಂಚಿಕೆಗಳ ಸಂಪಾದಕರಾಗಿದ್ದಾರೆ. ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಾಧಿಕಾರಿಗಳಾಗಿಯೂ ಸೇವೆ ಸಲ್ಲಿಸಿದ್ದಾರೆ. ಮೈಸೂರಿನ ರೋಟರಿ ಸಂಸ್ಥೆಯ 'ಆದರ್ಶ ಶಿಕ್ಷಕ' ಮತ್ತು ಮರಪ್ಪಸ್ವಾಮಿ ಧಾರ್ಮಿಕ ದತ್ತಿಯ 'ಬಸವ ಭಾನು' ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ.

**ಶ್ರೀ ಎಸ್.ಇ. ಗಂಗಾಧರಸ್ವಾಮಿಯವರು** ದಕ್ಷ ಪೊಲೀಸ್ ಅಧಿಕಾರಿಗಳು. ಉತ್ತಮ ಕಾರ್ಯನಿರ್ವಹಣೆಯಿಂದ ಜನರ ಮೆಚ್ಚುಗೆ ಗಳಿಸಿದವರು. 1994ರಲ್ಲಿ ಉಪ ಪೊಲೀಸ್ ನಿರೀಕ್ಷಕರಾಗಿ ವೃತ್ತಿ ಪ್ರಾರಂಭಿಸಿದರು. ನಂತರ ಮಂಡ್ಯ, ಚಾಮರಾಜನಗರ, ಪಿರಿಯಾಪಟ್ಟಣ, ಲೋಕಾಯುಕ್ತ ಸಂಸ್ಥೆಗಳಲ್ಲಿ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ಮೈಸೂರು ನಗರದ ಸಂಚಾರಿ ಉಪವಿಭಾಗದಲ್ಲಿ ಸಹಾಯಕ ಪೊಲೀಸ್ ಆಯುಕ್ತರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇವರ ಕರ್ತವ್ಯನಿಷ್ಠೆಯನ್ನು ಗುರುತಿಸಿ 2002ರಲ್ಲಿ ಮುಖ್ಯಮಂತ್ರಿಗಳ ರಜತ ಪದಕ ಲಭಿಸಿದೆ.

**ಶ್ರೀ ಎಂ.ಸಿ. ದೇವರಾಜುರವರು** ಮೈಸೂರು ಲಕ್ಷ್ಮೀಪುರಂ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ ಮುಖ್ಯ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಧರ್ಮಪತ್ನಿ ಶ್ರೀಮತಿ ಕೆ.ಎಂ. ಸರ್ವಮಂಗಳವರು ಗೃಹಿಣಿ. ಪುತ್ರ ಶ್ರೀ ಎಂ.ಡಿ. ಮಾದೇಶ್, ಪುತ್ರಿ ಎಂ.ಡಿ. ನಿಶ್ಚಿತ ಸುಶಿಕ್ಷಿತರಾಗಿ ಉದ್ಯೋಗದಲ್ಲಿದ್ದಾರೆ.